ಅಧ್ಯಕ್ಷರು: ಸದನವನ್ನು ಮಧ್ಯಾಹ್ನ 3.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 1 ಗಂಟೆ 18 ನಿಮಿಷಕ್ಕೆ ಮುಕ್ತಾಯಗೊಂಡು ಮತ್ತೆ ಮಧ್ಯಾಹ್ನ 3.00 ಗಂಟೆಗೆ ಸೇರಲು ನಿಶ್ಚಯಿಸತು)

ಸದನವು ಮಧ್ಯಾಹ್ನ 11.17 ಗಂಟೆಗೆ ಪ್ರಾರಂಭವಾಯಿತು.

(ಸನ್ಮಾನ್ಯ ಸಭಾಧ್ಯಕ್ಷರು ಅಧ್ಯಕ್ಷ ಪೀಠದಲ್ಲಿ ಉಪಸ್ಥಿತರಿದ್ದರು)

6. ಸಭೆಯ ಮುಂದಿಡಲಾದ ಕಾಗದ ಪತ್ರಗಳು:

ವಿಷಯ. ಆಸರೆ ಯೋಜನೆಯ ವಸ್ತು ನಿಷ್ಠೆ ಪ್ರಗತಿಯ ವರದಿ ಹಾಗೂ ಸರ್ಕಾರದ ಎರಡು ವರ್ಷಗಳ ಸಾಧನೆ ಬಗ್ಗೆ.–

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು): ಎರಡು ವಿಷಯಗಳನ್ನು ಸದನದಲ್ಲಿ ಪ್ರಸ್ತಾಪ ಮಾಡಲಿಕ್ಕೆ ಇಚ್ಛಿಸುತ್ತೇನೆ. ಉತ್ತರ ಕರ್ನಾಟಕದಲ್ಲಿ ಹಿಂದಿನ ವರ್ಷ ಬಂದ ಅನಿರೀಕ್ಷಿತ ಮಳೆಯಿಂದ ಬಹಳಷ್ಟು ಪ್ರಮಾಣದಲ್ಲಿ ಜನರ ಪ್ರಾಣ, ಆಸ್ತಿಗಳ ನಷ್ಟವಾಗಿ ಜನರ ಬದುಕು ಸಂಕಷ್ಟದಲ್ಲಿ ಸಿಲುಕಿತ್ತು. ಈ ಬಗ್ಗೆ ಸರ್ಕಾರ ಸಮರೋಪಾದಿಯಲ್ಲಿ ನೆರೆಪೀಡಿತರಿಗೆ ಅನೇಕ ರೀತಿಯಲ್ಲಿ ಪರಿಹಾರ ಕ್ರಮಗಳನ್ನು ಕೈಗೊಂಡಿರುತ್ತಾರೆ. ಈಗ ಆಸರೆ ಯೋಜನೆಯನ್ನು ಸಿದ್ಧಪಡಿಸಿ ಎಲ್ಲಾ ರೀತಿಯ ನೆರವಿನ ಕ್ರಮಗಳನ್ನು ಕೈಗೊಳ್ಳಲಾಗಿದೆ. ಈ ಬಗ್ಗೆ ಆಸರೆ ಯೋಜನೆಯ ವಸ್ತುನಿಷ್ಠ ಪ್ರಗತಿಯ ವರದಿ ಹಾಗು ಸರ್ಕಾರದ ಎರಡು ವರ್ಷಗಳ ಸಾಧನೆ ಎಂಬ ಎರಡು ಪುಸ್ತಕಗಳನ್ನು ಸದನದ ಮುಂದೆ ಮಂಡಿಸಲಿಕ್ಕೆ ನಾನು ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಈಗ ನಿಯಮ 69 ರ ಮೇರೆಗೆ ಇರುವ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಮಾನ್ಯ ವಿರೋಧ ಪಕ್ಷದ ನಾಯಕರು ಚರ್ಚೆಯನ್ನು ಪ್ರಾರಂಭ ಮಾಡಿ.

6. ನಿಯಮ 69ರ ಮೇಲೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿಯ ಮುಂದುವರೆದ ಚರ್ಚೆ: